ಮಂಡ್ಯ ನಗರದಲ್ಲಿ ಒಳಾಂಗಣ ಕ್ರೀಡಾಂಗಣ ನಿರ್ಮಾಣ

181(670) ಶ್ರೀ ಆತ್ಮಾನಂದ ಎಂ.ಎಸ್ (ಮಂಡ್ಯ ಮಾನ್ಯ ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮಂಡ್ಯ ನಗರದಲ್ಲಿ ಒಳಾಂಗಣ ಕ್ರೀಡಾಂಗಣ ನಿರ್ಮಾಣ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ?

ಆ) ಹಾಗಿದ್ದಲ್ಲಿ ಇದರ ವಿವರಗಳೇನು?

ಇ) ಪ್ರಸ್ತಾವನೆ ಯಾವ ಹಂತದಲ್ಲಿದೆ?

ಶ್ರೀ ಎಸ್.ಎಸ್. ಮಲ್ಲಿಕಾರ್ಜುನ್ (ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಉಪ ನೋಂದಣಾಧಿಕಾರಿಗಳ ಕಛೇರಿ ಸ್ಥಾಪನೆ ಬಗ್ಗೆ

182(270) ಶ್ರೀ ಭರಮಗೌಡ ಅ.ಹಾಗೆ (ಕಾಗವಾಡ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಳಗಾಂ ಜಿಲ್ಲೆಯ ಅಥಣಿ ತಾಲ್ಲೂಕಿನ ಕಾಗವಾಡ ಮತ ಕ್ಷೇತ್ರವು ಬೌಗೋಳಿಕವಾಗಿ ವಿಸ್ತರಣೆಗೊಂಡಿದ್ದು, ಇಲ್ಲಿನ ನಾಗರೀಕರಿಗೆ ಅನುಕೂಲಕ್ಕಾಗಿ ಉಪ ನೋಂದಣಾಧಿಕಾರಿಗಳ ಕಛೇರಿಯನ್ನು ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆಯೇ? ಉದ್ದೇಶಿಸಿದ್ದರೆ ಸದರಿ ಕಛೇರಿಯನ್ನು ಯಾವಾಗ ಪ್ರಾರಂಭಿಸಲಾಗುವುದು.

ಶ್ರೀ ಹೆಚ್. ಶ್ರೀಕಂಠಯ್ಯ (ಕಂದಾಯ ಸಚಿವರು):

ಅ) ಇಲ್ಲ.

ಅನುದಾನದ ಮಂಜೂರಾತಿ

184(675) ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) ಮಾನ್ಯ ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

1. ಧಾರವಾಡ ನಗರದ ಅನೇಕ ದೇವಸ್ಥಾನಗಳಿಗೆ ಮತ್ತು ಕಲ್ಯಾಣ ಮಂಟಪಗಳಿಗಾಗಿ ಹಣವನ್ನು ಎರಡು ವರ್ಷದಿಂದಲೂ ಕೇಳಿದ್ದು ಇದುವರೆವಿಗೂ ನೀಡಿರುವುದಿಲ್ಲ ಇದಕ್ಕಾಗಿ ಪ್ರತಿ ಶಾಸಕರ ಕ್ಷೇತ್ರದಲ್ಲಿ ಸರಕಾರ ಆಯ್ಕೆ ಮಾಡುವ ಮಾನದಂಡವೇನು? (ವಿವರ ನೀಡುವುದು)

2. ಧಾರವಾಡ ಮತ ಕ್ಷೇತ್ರದ ಶಾಸಕರು ಕೋರಿರುವ ಅನುದಾನದ ವಿವರವನ್ನು ನೀಡಲಾಗುವುದೇ?